## ದಿನಾಂಕ:–15–10–2022 (ಶನಿವಾರ) ರಂದು ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆ ನಡವಳಿಗಳು

*********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆಯು ದಿನಾಂಕ:–15–10–2022 ಶನಿವಾರ 10.30 ಗಂಟೆಗೆ ನೋಡೆಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗದ ಕಛೇರಿಯಲ್ಲಿ ನಡೆದಿರುತ್ತದೆ.

<u>ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ</u>

| ಕ್ರ.ಸಂ | ಅಧಿಕಾರಿಗಳು ಮತ್ತು ಸದಸ್ಯರ ಹೆಸರು | ಪದನಾಮ | ಇಲಾಖೆ | ಹಾಜರಾತಿ |
|---|---|---|---|---|
| 1 | ಶ್ರೀ. ರಾಧಕೃಷ್ಣ | ನೋಡಲ್ ಅಧಿಕಾರಿ | ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ವಿಭಾಗ | ಹಾಜರಾಗಿರುತ್ತಾರೆ |
| 2 | ಶ್ರೀ. ಮಾರುತಿ ಸೇಟ್ | ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ | ಹಾಜರಾಗಿರುತ್ತಾರೆ |
| 3 | ಶ್ರೀ. ಸಂದೀಪ್ ಕುಮಾರ್ | ಸದಸ್ಯರು | ಕಿ.ಆ.ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 4 | ಶ್ರೀ. ಸ್ವಾಮಿ ಗೌಡ | ಸದಸ್ಯರು | ಹೆಲ್ತ್ ಇನ್ಸಫೆಕ್ಟರ್ | ಹಾಜರಾಗಿರುತ್ತಾರೆ |
| 5 | ಕು॥ ಅನನ್ಯ.ಬಿ.ಕೆ. | ಸದಸ್ಯರು | ಸ.ಅ.(ಗುತ್ತಿಗೆ ಆದರದ ಮೇಲೆ) | ಹಾಜರಾಗಿರುತ್ತಾರೆ |
| 6 | ಶ್ರೀ. ಶಿವಕುಮಾರ್ | ಸದಸ್ಯರು | ಬೀದಿ ದೀಪ | ಹಾಜರಾಗಿರುತ್ತಾರೆ |
| 9 | ಶ್ರೀ.ಯಶವಂತ್.ಆರ್. | ಸದಸ್ಯರು | ಮಾರ್ಷಲ್ | ಹಾಜರಾಗಿರುತ್ತಾರೆ |
| 10 | ಶ್ರೀ.ಸಿ.ನಾರಾಯಣ್ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 11 | ಶ್ರೀ.ರಮೇಶ್ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 12 | ಶ್ರೀ.ಪದ್ಮನಾಭ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 13 | ಶ್ರೀ.ಶಾಂತ್‌ಕುಮಾರ್ | ಸದಸ್ಯರು | ಸ್ಯಾನಿಟರಿ ಧಪೇದಾರ್ | ಹಾಜರಾಗಿರುತ್ತಾರೆ |
| 14 | ಶ್ರೀ.ಪಾಪೇಗೌಡ | ಸದಸ್ಯರು | ಗ್ಯಾಂಗ್‌ಮ್ಯಾನ್ | ಹಾಜರಾಗಿರುತ್ತಾರೆ |
| 15 | ಶ್ರೀ.ಪಂಚಾಕ್ಷರಿ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 16 | ಶ್ರೀ.ಎಂ.ಡಿ.ಸಮ್‌ಷೀರ್ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |
| 17 | ಶ್ರೀ.ಯೋಗೇಶ್ | ಸದಸ್ಯರು | ಘನ ತ್ಯಾಜ್ಯ ನಿರ್ವಹಣೆ (ಸೂಪರ್ ವೈಸ್) | ಹಾಜರಾಗಿರುತ್ತಾರೆ |

ವಾರ್ಡ್ ಕಮಿಟಿ ಸಭೆಯನ್ನು ನಡೆಸುವ ಕುರಿತಾಗಿ ದಿನಾಂಕ:–15–10–2022 ರ ಸಭೆಯ ಸೂಚನಾ ಪತ್ರವನ್ನು ವಾರ್ಡ್ ಸಂಖ್ಯೆ : 161 ಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಕಳುಹಿಸಿಕೊಡಲಾಗಿರುತ್ತದೆ ಹಾಗೂ ವಾರ್ಡ್ ಸಂಖ್ಯೆ : 161 ವಾಟ್ಸ್ ಆಫ್ ಗ್ರೂಪ್‌ಗೆ ಸದರಿ ಸಭೆಯ ಸೂಚನಾ ಪತ್ರವನ್ನು ಹಾಕಲಾಗಿರುತ್ತದೆ.

ಸಭೆಯ ಪ್ರಾರಂಭಿಕ ಹಂತದಲ್ಲಿ ವಾರ್ಡ್ ಕಾರ್ಯದರ್ಶಿ ರವರು ಸಭೆಗೆ ಹಾಜರಿದ್ದ ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಸ್ವಾಗತಿಸಿದರು.

ಸಭೆಯಲ್ಲಿ ಸಾರ್ವಜನಿಕ ದೂರುಗಳಿಗೆ ಸಂಬಂಧಿಸಿದಂತೆ ಚರ್ಚಿಸಲಾಯಿತು.

1. **ಆರೋಗ್ಯ ಇಲಾಖೆ** : ಬಿ.ಸಿ.ಸಿ. ಲೇಔಟ್ 2ನೇ ಹಂತ, 10ನೇ ಅಡ್ಡರಸ್ತೆ, ಮನೆ ನಂ.292 ರ ಮುಂದೆ ಹಸುಗಳ ಮಾಂಸವನ್ನು ಬೀಸಾಡಿ ಹೋಗಿರುತ್ತಾರೆ ಇದರ ಬಗ್ಗೆ ಕ್ರಮವನ್ನು ಕೈಗೊಳ್ಳಬೇಕೆಂದು ಶ್ರೀ.ಪಂಚಾಕ್ಷರಿ ರವರು ತಿಳಿಸಿರುತ್ತಾರೆ. ಈ ಕುರಿತು ಕೂಡಲೇ ಅಗತ್ಯ ಕ್ರಮವಹಿಸುವಂತೆ ನೋಡೆಲ್ ಅಧಿಕಾರಿಯವರು ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಚಿಸಿರುತ್ತಾರೆ.

ಕ್ರಮ : ಘನತ್ಯಾಜ್ಯ ನಿರ್ವಹಣೆ ಕೋಶ

2. **ಅರಣ್ಯ ಇಲಾಖೆ** : ತೋಟಗಾರಿಕೆ ದಕ್ಷಿಣ ವಲಯದ ವ್ಯಾಪ್ತಿಗೆ ಬರುವ ವಿಜಯನಗರ ವಿಧಾನ ಸಭಾ ಕ್ಷೇತ್ರದ ಉದ್ಯಾನವನಗಳಲ್ಲಿ ಹಲವಾರು ಒಣಗಿದ ಮರಗಳು ಕೊಂಬೆಗಳು ಹೆಚ್ಚಾಗಿರುತ್ತದೆ ಹಾಗೂ ಹಲವಾರು ಮರಗಳು ವಿದ್ಯುತ್ ತಂತಿಗಳ ಪಕ್ಕದಲ್ಲಿ ಇರುತ್ತದೆ. ಇವುಗಳಲ್ಲಿ ಹಲವಾರು ಮರಗಳು ಸಂಪೂರ್ಣವಾಗಿ ಒಣಗಿದ್ದು ಯಾವುದೇ ಸಮಯದಲ್ಲಿ ಬೀಳುವ ಸಂಭವವಿರುತ್ತದೆ. ಇದರಿಂದಾಗಿ ಉದ್ಯಾನವನಕ್ಕೆ ಬರುವ ವಿಹಾರಿಗಳ ಮೇಲೆ ಬೀಳುವ ಸಂಭವವಿರುತ್ತದೆ. ಆದುದರಿಂದ ಸದರಿ ಬೀಳುವ ಸ್ಥಿತಿಯಲ್ಲಿರುವ ಮರಗಳನ್ನು ಮತ್ತು ಒಣಗಿರುವ ಕೊಂಬೆಗಳನ್ನು ತುರ್ತಾಗಿ ನಿಯಾಮನುಸಾರ ತೆರವುಗೊಳಿಸಲು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತಿಳಿಸಿರುತ್ತಾರೆ. ಈ ಕುರಿತು ಅಗತ್ಯ ಕ್ರಮಕೈಗೊಳ್ಳುವುದಾಗಿ ನೋಡೆಲ್ ಅಧಿಕಾರಿಯವರು ತಿಳಿಸಿದರು.

ಕ್ರಮ : ಅರಣ್ಯ ಇಲಾಖೆ

3. **ಕಾಮಗಾರಿ ಇಲಾಖೆ** : ಬಿ.ಸಿ.ಸಿ. ಬಳಿ ರಸ್ತೆ ಗುಂಡಿಗಳು ಹೆಚ್ಚಾಗಿದ್ದು ಸಾರ್ವಜನಿಕರ ಸಂಚಾರಕ್ಕೆ ಮತ್ತು ವಾಹನಗಳ ಓಡಾಟಕ್ಕೆ ತೊಂದರೆಯಾಗುತ್ತಿದೆ ಎಂದು ಶ್ರೀ.ಸಿ.ನಾರಾಯಣ್ ರವರು ತಿಳಿಸಿರುತ್ತಾರೆ. ಈ ಕುರಿತು ಅಗತ್ಯ ಕ್ರಮವಹಿಸುವುದಾಗಿ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಕ್ರಮ : ಕಾಮಗಾರಿ ಇಲಾಖೆ

ಸಭೆಗೆ ಗೈರು ಹಾಜರಾಗಿರದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತೀವ್ರ ಅಸಮದಾನ ವ್ಯಕ್ತಪಡಿಸಿದ್ದು, ಮುಂದಿನ ಸಭೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ತಪ್ಪದೆ ಹಾಜರಾಗುವಂತೆ ಸಭೆಯು ತೀರ್ಮಾನಿಸಿರುತ್ತದೆ. ಗೈರು ಅಧಿಕಾರಿಗಳಿಗೆ ಸಂಬಂಧಿಸಿದಂತೆ ಅವರ ಇಲಾಖೆಗಳ ಮೇಲಾಧಿಕಾರಿಗಳಿಗೆ ವರದಿ ಮಾಡಲಾಗುವುದೆಂದು ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಹಾಲಿಸಿ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡು ಸಂಬಂಧಪಟ್ಟ ಇಲಾಖೆಗಳು ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿರವರ ಆದೇಶದ ಮೇರೆಗೆ**

**ಕಾರ್ಯದರ್ಶಿ**

**ವಾರ್ಡ್ ಸಂಖ್ಯೆ : 161 ಅತ್ತಿಗುಪ್ಪೆ**

**ಪ್ರತಿಯನ್ನು:-**

1. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಮುಖ್ಯ ಅಭಿಯಂತರರು (ದಕ್ಷಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಾರ್ಯಪಾಲಕ ಅಭಿಯಂತರರು, ವಿಜಯನಗರ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
5. ಕಛೇರಿ ಕಡತಕ್ಕಾಗಿ.